ಫಾರೆಸ್ಟ್ ಇಲಾಖೆ.

ನೋ ಟಿ ಸ್.

ತಾರೀಖು 1ನೆ ಫೆಬ್ರವರಿ 1907.

ಗುಡಿಯಾತಂ ತಾಲ್ಲೂಕು ರಾಮಾಲೆ ಗ್ರಾಮದ ಕಂಟ್ರಾಕ್ಟರ್ (ಮೃತಪಟ್ಟ) ಸಂಜೀವೈಯ್ಯನೆಂಬುವನು ಖಾತರಿಗಾಗಿ ಇಟ್ಟಿದ್ದ 25 ರೂಪಾಯಿ ಜೀವಣಿ ಮೊಬಲಗು ಬೆಂಗಳೂರು ಫಾರೆಸ್ಟ್ ರೇಂಜಾಫೀಸರಲ್ಲಿ ಪಾವತಿ ಮಾಡಲೆ ನಿಂತಿರುತ್ತೆ.

ಸದರಿ ಮೃತಪಟ್ಟ ಕಂಟ್ರಾಕ್ಟರನ ವಾರಸುದಾರರು ಯಾರಾದರೂ ಇದ್ದಲ್ಲಿ ಸದರಿ ಹಣಕ್ಕಾಗಿ ತಕ್ಕ ಸಮಜಾಯಿಷಿಯೊಡನೆ ಈ ತಾರೀಖು ಲಾಗಾಯಿತು 3 ತಿಂಗಳುಗಳೊಳಗಾಗಿ ನಮ್ಮ ಆಫೀಸಿಗೆ ಬರೆದುಕೊಳ್ಳಬೇಕು. ತಪ್ಪಿದಲ್ಲಿ ಸದರಿ ಮೊಬಲಗು ಸರ್ಕಾರಕ್ಕೆ ಸೇರಿಸಿಕೊಳ್ಳಲಾಗುತ್ತೆ.

ಟಿ. ಅಬ್ದುಲ್ ಕರೀಂ,
ಡೆಪ್ಯೂಟಿ ಕನ್ಸರ್ವೇಟರ್ ಆಫ್ ಫಾರೆಸ್ಟ್ಸ್, ಬೆಂಗಳೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್.

ಇಸ್ತಿಹಾರ್ ನಾಮಾ, ತಾರೀಖು 25ನೆ ಜನವರಿ 1907.

ಕೃಷ್ಣರಾಜಪೇಟೆ ತಾಲ್ಲೂಕು ಅಕ್ಕಿ ಹೆಬ್ಬಾಳು ಹೋಬಳಿಗೆ ಸೇರಿದ ಸರ್ವಮಾನ್ಯ ಬೊಮ್ಮನಹಳ್ಳಿ ಗ್ರಾಮವು, ಸರ್ಕಾರಕ್ಕೆ ಬರಬೇಕಾದ ಬಾಕಿಗೋಸ್ಕರವಾಗಿ ಕೃಷ್ಣರಾಜಪೇಟೆ ತಾಲ್ಲೂಕು ಕಟ್ಟೇರಿಯಲ್ಲಿ 1907ನೆ ಮಾರ್ಚಿ ಮಾಹೆ 9ನೆ ತಾರೀಖು ದಿವಸ ಬಹಿರಂಗವಾಗಿ ಹರಾಜು ಮಾಡಿಸಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹೆಚ್ಚು ತಪಶೀಲ್ ಬಗ್ಗೆ 1907ನೆ ಇಸವಿ ಫೆಬ್ರವರಿ 7ನೆ ಮಕ್ರ್ಯಾಂ 6ನೆ ನಂಬರ್ ಮೈಸೂರ ಗೆಜೆಟ್ಟಿನ IIನೆ ಭಾಗದ 42-43ನೆ ನಂಬರ ಪೇಜು ನೋಡತಕ್ಕದ್ದು.

ಇಸ್ತಿಹಾರ್ನಾಮಾ, ತಾರೀಖು 25ನೆ ಜನವರಿ 1907.

ಕೃಷ್ಣರಾಜಪೇಟೆ ತಾಲ್ಲೂಕು ಅಕ್ಕಿಹೆಬ್ಬಾಳು ಹೋಬಳಿಗೆ ಸೇರಿದ ಸರ್ವಮಾನ್ಯ ಲಕ್ಷ್ಮಿಪುರ, ಗ್ರಾಮವು, ಸರ್ಕಾರಕ್ಕೆ ಬರಬೇಕಾದ ಬಾಕಿಗೋಸ್ಕರವಾಗಿ ಕೃಷ್ಣರಾಜಪೇಟೆ ತಾಲ್ಲೂಕು ಕಟ್ಟೇರಿಯಲ್ಲಿ 1907ನೆ ಮಾರ್ಚಿ 9ನೆ ತಾರೀಖು ದಿವಸ ಬಹಿರಂಗವಾಗಿ ಹರಾಜು ಮಾಡಿಸಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹೆಚ್ಚು ತಪಶೀಲ್ ಬಗ್ಗೆ 1907ನೆ ಇಸವಿ ಫೆಬ್ರವರಿ 7ನೆ ಮಕ್ರ್ಯಾಂ 6ನೆ ನಂಬರ್ ಮೈಸೂರು ಗೆಜೆಟ್ಟಿನ IIನೆ ಭಾಗದ 41-42ನೆ ನಂಬರ್ ಪೇಜು ನೋಡತಕ್ಕದ್ದು.

ಟಿ. ಕೆ. ಸುಂದರರಾಜೈಯ್ಯಂಗಾರ್,
ಎ. ಫಾರ್ ಡೆಪ್ಯೂಟಿ ಕಮಿಷನರ್.

ಹಾಸನ ಡಿಸ್ಟ್ರಿಕ್ಟ್.

ಇಸ್ತಿಹಾರ್.

ತಾರೀಖು 8ನೆ ಫೆಬ್ರವರಿ 1907.

ಹೊಳೆ ನರಸೀಪುರ ತಾಲ್ಲೂಕು ದೊಡ್ಡ ಕಾಡನೂರು ಹೋಬಳಿ ಜೋಡಿ ಕುಸ್ಕೂರು ಗ್ರಾಮವು ಜೋಡಿದಾರ್ರು ನಾರಾಯಣರಾವ್ ವಗೈರೆಯವರಿಂದ ಬರತಕ್ಕ ಜೋಡಿ ಬಾಕಿಗಾಗಿ 1907ನೆ ಇಸವಿ ಮಾರ್ಚಿ ಮಾಹೆ 25ನೆ ತಾರೀಖು ಸೋಮವಾರ ದಿವಿ 11 ಘಂಟೆ ಲಾಗಾಯಿತು ಹೊಳೆ ನರಸೀಪುರದ ಪೊಕ್ಕಾಂನಲ್ಲಿ ಬಹಿರಂಗವಾಗಿ ಹರಾಜು ಮಾಡಿಸಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹೆಚ್ಚು ತಪಶೀಲ್ ಬಗ್ಗೆ 1907ನೆ ಇಸವಿ ಫೆಬ್ರವರಿ 14ನೆ ಮಕ್ರ್ಯಂ ಮೈಸೂರು ಗೆಜೆಟ್ಟಿನ IIನೆ ಭಾಗದ 51-52ನೆ ಪುಟವನ್ನು ನೋಡತಕ್ಕದ್ದು.

ತಾರೀಖು 9ನೆ ಫೆಬ್ರವರಿ 1907.

ಸಕಲ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡಿದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸವ್ವಾಧಾನಕ್ಕೋಸ್ಕರ ಕ್ರಮ ಪ್ರಕಾರ ಜಪ್ತಿ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡಿ ಗ್ರಾಮವು ಇದರಡಿ ಕಂಡ ತಖ್ತೆಯಲ್ಲಿ ನಮೂದಿರುವ ಸ್ಥಳದಲ್ಲೂ ಮತ್ತು ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು; ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಯೆ 11 ಘಂಟೆಗೆ ಹರಾಜು ಮುರುವಾಗಿ ಉಳಿಕೆ ಯಾವದೂ ಇಲ್ಲವೆ ಗ್ರಾಮವು ಜಡಪ್ತರಖಾಸ್ತುದಾರರಿಗೆ ಹರಾಜು ನಿಲ್ಲುವದು.

2. ಪರಂತು ಬಂದು ಗ್ರಾಮವು ಬೇರೆಬೇರೆಯಾಗಿ ಮುಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯೂಟಿ ಕಮಿಷನರವರು ತಮ್ಮ ಯಖ್ತ್ಯಾರೀ ಮೇಲೆ ಪೂರಾ ಗ್ರಾಮಗಳನ್ನು ವಿಕ್ರಯಿಸುವುದಕ್ಕೆ ಬದಲಾಗಿ ಪ್ರತಿ ಬಂದು ವೃತ್ತಿಯನ್ನೂ ಬೇರೆ ಬೇರೆಯಾಗಿ ಹರಾಜು ಹಾಕಿಸುವರು.